ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

"ರೊಳ್ಳಿ" ಗ್ರಾಮದಲ್ಲಿ ಹೊಸ ಗ್ರಾಮ ಪಂಚಾಯಿತಿಯನ್ನು ರಚಿಸುವ ಬಗ್ಗೆ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

662 (674) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೊಸದಾಗಿ ಗ್ರಾಮ ಪಂಚಾಯತಿಗಳನ್ನು ರಚಿಸುವಾಗ ಅನುಸರಿಸುವ ನಿಯಮಗಳೇನು;

(ಆ) ಗ್ರಾಮ ಪಂಚಾಯತಿಗಳ ಪುನರ್ ವಿಂಗಡನೆ ಸಂದರ್ಭದಲ್ಲಿ ರಾಜ್ಯಾದ್ಯಂತ ಎಷ್ಟು ಹೊಸ ಗ್ರಾಮ ಪಂಚಾಯತಿಗಳನ್ನು ರಚಿಸಲಾಗಿದೆ;

(ಇ) ಬೀಳಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಾಗಲಕೋಟೆ ಜಿಲ್ಲೆಯ "ರೊಳ್ಳಿ' ಗ್ರಾಮದಲ್ಲಿ ಹೊಸ ಗ್ರಾಮ ಪಂಚಾಯತಿಯನ್ನು ರಚಿಸಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ "ರೊಳ್ಳಿ" ಗ್ರಾಮದಲ್ಲಿ ಇಲ್ಲಿಯವರೆಗೂ ಹೊಸ ಗ್ರಾಮ ಪಂಚಾಯತಿಯನ್ನು ರಚಿಸದೇ ಇರುವುದಕ್ಕೆ ಕಾರಣಗಳೇನು;

(ಉ) "ರೊಳ್ಳಿ" ಗ್ರಾಮದ ಜನರು ಗ್ರಾಮ ಪಂಚಾಯತಿ ಚುನಾವಣೆಯನ್ನು ಬಹಿಷ್ಕರಿಸಿರುವುದನ್ನು ಸರ್ಕಾರ ಗಮನಿಸಿದೆಯೇ;

(ಊ) ಯಾವ ಕಾಲಮಿತಿಯಲ್ಲಿ ಸದರಿ "ರೊಳ್ಳಿ" ಗ್ರಾಮಕ್ಕೆ ಹೊಸ ಗ್ರಾಮ ಪಂಚಾಯತಿಯನ್ನು ರಚಿಸಲಾಗುವುದು?